# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:13ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೆಯ ಪಟ್ಟಿ

### 02. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಶಾಸಕರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 04. ವರದಿಯನ್ನೊಪ್ಪಿಸುವುದು

**ಡಾ. ತಳವಾರ್ ಸಾಬಣ್ಣ ಅವರು (ಸದಸ್ಯರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2020-21ನೇ ಸಾಲಿನ 03ನೇ ವರದಿಯನ್ನೊಪ್ಪಿಸುವುದು.

### 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೆಂಪೇಗೌಡ ಬಡಾವಣೆ ನಿರ್ಮಾಣ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನುಗಳನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

..2..

02. **ಶ್ರೀ ಯು.ಬಿ.ವೆಂಕಟೇಶ್** ಅವರು ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ಹಾಗೂ ಶ್ರೀ ವಸಿಷ್ಠ ಸೌಹಾರ್ದ ಸಹಕಾರ ನಿಯಮಿತ ಬ್ಯಾಂಕ್‌ಗಳಲ್ಲಿ ನಡೆದಿರುವ ಅವ್ಯವಹಾರಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಈವರೆವಿಗೂ ಕ್ರಮ ಕೈಗೊಳ್ಳದಿರುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

03. **ಶ್ರೀ ಗೋವಿಂದರಾಜು** ಅವರು ಕೋಲಾರ ನಗರದಿಂದ ಅಂತರಗಂಗೆ ಬೆಟ್ಟದ ಬುಡದವರೆಗೂ ರಸ್ತೆಯನ್ನು ಅಭಿವೃದ್ಧಿಪಡಿಸಿ ಬೆಟ್ಟದ ಬುಡದಿಂದ ಕಾಶಿ ವಿಶ್ವೇಶ್ವರ (ಅಂತರಗಂಗೆ) ದೇವಸ್ಥಾನದವರೆಗೂ ರಸ್ತೆ ಸಂಪರ್ಕವನ್ನು ಕಲ್ಪಿಸುವ ಕುರಿತು ಮಾನ್ಯ ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಸ್.**ರವಿ ಅವರು ರಾಜ್ಯದಲ್ಲಿ ಇತ್ತೀಚೆಗೆ ಸುರಿದ ಭಾರಿ ಮಳೆಯಿಂದ ಹಾಲಿನ ಇಳುವರಿ ಕುಸಿದಿರುವುದರಿಂದ ಹೈನುಗಾರರ ಆರ್ಥಿಕ ಪುನಃಶ್ಚೇತನಕ್ಕಾಗಿ ಹಾಲಿನ ದರವನ್ನು ಹೆಚ್ಚಳ ಮಾಡುವ ಬಗ್ಗೆ ಹಾಗೂ ಹೈನುಗಾರರಿಗೆ ವಿಶೇಷ ಸಹಾಯ ಧನ ನೀಡಿ ಪ್ರೋತ್ಸಾಹಿಸುವ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

05. **ಶ್ರೀ ಶಾಂತರಾಮ್ ಬುಡ್ನ** ಸಿದ್ದಿ ಅವರು ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನಲ್ಲಿ ವಾಸಿಸುತ್ತಿರುವ **"ಗೊಂಡ"** ಸಮುದಾಯದವರಿಗೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡದೆ ಇರುವ ಕುರಿತು ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಮರಿತಿಬ್ಬೇಗೌಡ** ಅವರು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೇ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪ್ರಕಾಶ್ ಕೆ ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ರಾಜ್ಯದ ನಗರ ಪ್ರದೇಶದಲ್ಲಿರುವ ಶಾಲಾ ಕಾಲೇಜುಗಳ ಸಮೀಪ ಮಾದಕ ದ್ರವ್ಯಗಳನ್ನು ಮಾರುವ ಅಂಗಡಿಗಳನ್ನು ತೆರೆದಿರುವುದರಿಂದ ವಿದ್ಯಾರ್ಥಿಗಳು ಹಾಗೂ ಯುವ ಜನತೆಯ ಮೇಲೆ ಬೀರುತ್ತಿರುವ ದುಷ್ಪರಿಣಾಮಗಳ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಕೋವಿಡ್ 19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಪ್ರೌಢ ಶಾಲೆಗಳು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಹ ಶಿಕ್ಷಕರು ಮತ್ತು ಉಪನ್ಯಾಸಕರ ನೇಮಕಾತಿಯಲ್ಲಿ 2 ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿರುವ ರೀತ್ಯಾ ಅನುದಾನಿತ ಪದವಿ ಪೂರ್ವ ಕಾಲೇಜು / ಶಿಕ್ಷಣ ಸಂಸ್ಥೆಗಳ ಉಪನ್ಯಾಸಕರ ನೇಮಕಾತಿಯಲ್ಲಿ 2 ವರ್ಷಗಳ ವಯೋಮಿತಿ ಸಡಿಲಿಕೆಯನ್ನು ನೀಡುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಪಿ.ಆರ್ ರಮೇಶ್** ಅವರು ಕುಣಿಗಲ್ ತಾಲ್ಲೂಕಿನ ವೈ. ಹೊಸಹಳ್ಳಿಯಿಂದ ಹಂಪಾಪುರ ಮಧ್ಯೆ ಸುಮಾರು 600 ಮೀಟರ್ ಉದ್ದದ ಸಂಪರ್ಕ ಸೇತುವೆಯನ್ನು ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---